ಟ್ಯಾಂಕರ್‌ಗಳ ಮೂಲಕ ಕುಡಿಯುವ ನೀರಿನ ತಾತ್ಕಾಲಿಕ ವ್ಯವಸ್ಥೆ ಮಾಡಲು ಉದ್ದೇಶಿಸಿದೆ.

ಕುಂದಾಪುರ ತಾಲ್ಲೂಕು ದಕ್ಷಿಣ ಹೆಮ್ಮಾಡಿ, ಮದುವನ ಹಾಲಾಡಿಗಳು ವಿದ್ಯುತ್ ಸಬ್ ಸ್ಟೇಷನ್

725 - ಶ್ರೀ ಐ.ಎಂ. ಜಯರಾಮ ಶೆಟ್ಟಿ (ಬೈಂದೂರು) : ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) *ಕುಂದಾಪುರ ತಾಲ್ಲೂಕು ದಕ್ಷಿಣ ಹೆಮ್ಮಾಡಿ, ಮದುವನ ಹಾಲಾಡಿಗಳಲ್ಲಿ ವಿದ್ಯುತ್ ಸಬ್-ಸ್ಟೇಷನ್ ಪ್ರಾರಂಭಿಸಲು ಸರ್ಕಾರ ನಿರ್ದರಿಸಿದೆಯೇ?*

ಆ) *ಹಾಗಿದ್ದಲ್ಲಿ ಯಾವಾಗಿನಿಂದ ಈ ಕೆಲಸವನ್ನು ಪ್ರಾರಂಭಿಸಲಾಗುವುದು?*

ಶ್ರೀ ಹೆಚ್.ಕೆ. ಪಾಟೀಲ್ (ಉಪ ಮುಖ್ಯಮಂತ್ರಿಗಳು) :

ಅ) ಕುಂದಾಪುರ ತಾಲ್ಲೂಕಿನ ಹಾಲಾಡಿಯಲ್ಲಿ ಒಂದು 110 ಕೆ.ವಿ. ಸಬ್-ಸ್ಟೇಷನ್ ಸ್ಥಾಪಿಸಲು ಉದ್ದೇಶಿಸಲಾಗಿದೆ. ಇದೇ ತಾಲ್ಲೂಕಿನ ದಕ್ಷಿಣ ಹೆಮ್ಮಾಡಿಯಲ್ಲಿ ಒಂದು 33 ಕೆ.ವಿ. ಸಬ್‌ಸ್ಟೇಷನ್ ಸ್ಥಾಪಿಸುವ ಬಗ್ಗೆ ಪರಶೀಲಿಸಲಾಗುತ್ತಿದೆ ಆದರೆ ಮದುವನದಲ್ಲಿ ವಿದ್ಯುತ್ ಸಬ್-ಸ್ಟೇಷನ್ ಸ್ಥಾಪನೆ ಬಗ್ಗೆ ಪ್ರಸ್ತಾವನೆಯು ಸದ್ಯಕ್ಕೆ ಇರುವುದಿಲ್ಲ

ಆ) ಹಾಲಾಡಿಯಲ್ಲಿ 110 ಕೆ.ವಿ. ಸಬ್-ಸ್ಟೇಷನ್ ನಿರ್ಮಾಣದ ಕಾರ್ಯವನ್ನು 1996-97ರ ಸಾಲಿನಲ್ಲಿ ಪ್ರಾರಂಭಿಸಲು ಉದ್ದೇಶಿಸಿದೆ.

ಕೊಲ್ಲೂರು ಗ್ರಾಮದಲ್ಲಿ ಕುಡಿಯುವ ನೀರಿನ ಸಮಸ್ಯೆ

719 - ಶ್ರೀ ಐ.ಎಂ. ಜಯರಾಮ ಶೆಟ್ಟಿ (ಬೈಂದೂರು) : ಮಾನ್ಯ ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) *ಪ್ರಸಿದ್ಧ ಯಾತ್ರಾಸ್ಥಳವಾದ ಕೊಲ್ಲೂರು ಮುಕಾಂಬಿಕೆಯ, ಕೊಲ್ಲೂರು ಗ್ರಾಮದಲ್ಲಿ ಕುಡಿಯುವ ನೀರಿಗಾಗಿ ವ್ಯಾಪಕ ಕೊರತೆ ಇರುವ ವಿಷಯ ನಿಜವೇ?*

ಆ) *ಹಾಗಿದ್ದಲ್ಲಿ ಸರ್ಕಾರ ಈ ಬಗ್ಗೆ ಯಾವ ಕ್ರಮಗಳನ್ನು ಕೈಗೊಂಡಿದೆ?*

ಇ) *ಹಾಗಿಲ್ಲದಿದ್ದಲ್ಲಿ ಸರ್ಕಾರ ಯಾವ ಕ್ರಮಗಳನ್ನು ಕೈಗೊಳ್ಳಲು ಉದ್ದೇಶಿಸಿದೆ?*

ಶ್ರೀ ಎಂ.ಪಿ. ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪ.ರಾಜ್ ಸಚಿವರು) :

ಅ) ಇಲ್ಲ

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ

ಕುಂದಾಪುರ ತಾಲ್ಲೂಕು "ಮರವಂತೆ"ಯನ್ನು ಪ್ರವಾಸಿ ತಾಣವಾಗಿ ಮಾಡುವುದು

729 - ಶ್ರೀ ಐ.ಎಂ. ಜಯರಾಮಶೆಟ್ಟಿ (ಬೈಂದೂರು) : ಮಾನ್ಯ ಉಪ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) *ರಾಜ್ಯದ ಪ್ರಖ್ಯಾತ ಸಮುದ್ರ ದಂಡೆಯಿಂದ ಕುಂದಾಪುರ ತಾಲ್ಲೂಕು, ಮರವಂತೆಯನ್ನು ಪ್ರವಾಸಿತಾಣವಾಗಿ ಅಭಿವೃದ್ಧಿಪಡಿಸಲು ಉದ್ದೇಶಿಸಿದೆಯೇ?*

ಆ) *ಹಾಗಿದ್ದಲ್ಲಿ ಇಲ್ಲಿಯವರೆಗೆ ಈ ಬಗ್ಗೆ ನಡೆದಿರುವ ಪ್ರಗತಿಯ ವಿವರ ಒದಗಿಸುವುದು?*

ಇ) *ಮರವಂತೆ ಯಾವ ವೈಶಿಷ್ಟ್ಯಗಳನ್ನು ಪ್ರವಾಸಿಗರಿಗೆ ಒದಗಿಸಲು ಸರ್ಕಾರ ನಿರ್ಧರಿಸಿದೆಯೇ ಮತ್ತು ಈ ಬಗ್ಗೆ ಚಿಂತನೆ ನಡೆದಿದೆಯೇ?*

ಶ್ರೀ ಹೆಚ್.ಕೆ. ಪಾಟೀಲ್ (ಉಪಮುಖ್ಯ ಮಂತ್ರಿಗಳು) :

ಅ) ಹೌದು

ಆ) ಪ್ರವಾಸೋದ್ಯಮ ಇಲಾಖೆಯು ಮರವಂತೆಯಲ್ಲಿ ಪ್ರವಾಸಿಗರಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಅಲಂಕಾರಿಕ ತೋಟ, ಕುಡಿಯುವ ನೀರಿನ ವ್ಯವಸ್ಥೆ, ಲ್ಯಾಂಡ್ ಸ್ಕೇಪಿಂಗಾಗಿ ರೂ. 5.00 ಲಕ್ಷಗಳನ್ನು ದಕ್ಷಿಣ ಕನ್ನಡ ಜಿಲ್ಲಾ ಪಂಚಾಯಿತಿಗೆ 1994-95ನೇ ಸಾಲಿನಲ್ಲಿ ಬಿಡುಗಡೆ ಮಾಡಿದೆ.

ಇ) ಇಲ್ಲ

ಗ್ರಾಮ ಪಂಚಾಯಿತಿಗಳ ಬಗ್ಗೆ

730 - ಶ್ರೀ ಐ.ಎಂ. ಜಯರಾಮಶೆಟ್ಟಿ (ಬೈಂದೂರು) : ಮಾನ್ಯ ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಒಟ್ಟು ಎಷ್ಟು ಗ್ರಾಮ ಪಂಚಾಯಿತಿಗಳಿವೆ, ಇವುಗಳಲ್ಲಿ ಎಷ್ಟು ಗ್ರಾಮ ಪಂಚಾಯಿತಿಗಳಲ್ಲಿ ಕಾರ್ಯದರ್ಶಿಗಳ ಹುದ್ದೆಗಳು ಖಾಲಿ ಇವೆ, ಈ ಕಾರ್ಯದರ್ಶಿಗಳ ಕೊರತೆಯಿಂದ ಜನತೆಗೆ ಉಂಟಾಗಿರುವ ಸಮಸ್ಯೆಗಳೇನು?

ಆ) ಈ ಖಾಲಿ ಇರುವ ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಹುದ್ದೆಗಳನ್ನು ಎಷ್ಟು ದಿನಗಳಲ್ಲಿ ಸರ್ಕಾರ ಭರ್ತಿ ಮಾಡುತ್ತದೆ.

ಶ್ರೀ ಎಂ.ಪಿ. ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪ.ರಾಜ್ ಸಚಿವರು) :

ಅ)		ಗ್ರೇಡ್-1	ಗ್ರೇಡ್-2
1)	ಒಟ್ಟು ಗ್ರಾಮ ಪಂಚಾಯಿತಿಗಳು	136	219
2)	ಖಾಲಿ ಹುದ್ದೆಗಳು	11	44

ಖಾಲಿ ಇರುವ ಒಟ್ಟು 55 ಹುದ್ದೆಗಳಲ್ಲಿ ಪ್ರಭಾರ ವ್ಯವಸ್ಥೆಯ ಮೂಲಕ ಗ್ರಾಮ ಪಂಚಾಯಿತಿಯ ಕೆಲಸ ಕಾರ್ಯವನ್ನು ನಿರ್ವಹಿಸಲು ಏರ್ಪಾಟು ಮಾಡಲಾಗಿದೆ. ಇದರಿಂದಾಗಿ ಗ್ರಾಮ ಪಂಚಾಯಿತಿ ಕೆಲಸ ಕಾರ್ಯಗಳ ನಿರ್ವಹಣೆಯಲ್ಲಿ ಸ್ವಲ್ಪಮಟ್ಟಿಗೆ ವಿಳಂಬವಾಗುತ್ತಿವೆ.

ಆ) ಖಾಲಿ ಇರುವ 55 ಗ್ರಾಮ ಪಂಚಾಯಿತಿ ಕಾರ್ಯದರ್ಶಿಗಳ ಹುದ್ದೆಗಳನ್ನು ನೇಮಕಾತಿ ನಿಯಮಗಳ ಪ್ರಕಾರ ಭರ್ತಿ ಮಾಡಲು ಕ್ರಮವನ್ನು ಪ್ರಾರಂಭಿಸಲಾಗಿದೆ. ಆದಷ್ಟು ಜಾಗ್ರತೆ ಭರ್ತಿ ಮಾಡಲಾಗುವುದು.

ಮೀನುಗಾರಿಕಾ ರಸ್ತೆ ನಿರ್ಮಾಣ

155 - ಶ್ರೀ ಕೆ. ಜಯರಾಮಶೆಟ್ಟಿ (ಉಳ್ಳಾಲ) : ಮಾನ್ಯ ಮೀನುಗಾರಿಕೆ ಮತ್ತು ಬಂದರು ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಜ್ಯದಲ್ಲಿ 1995-96 ಸಾಲಿನಲ್ಲಿ ಮೀನುಗಾರಿಕೆ ರಸ್ತೆ ನಿರ್ಮಾಣಕ್ಕಾಗಿ ಎಷ್ಟು ಅನುದಾನ ನೀಡಲಾಗಿದೆ?

(ಜಿಲ್ಲಾವಾರು ವಿವರ ನೀಡುವುದು)

ಆ) ಉಳ್ಳಾಲ ವಿಧಾನಸಭಾ ಕ್ಷೇತ್ರದಲ್ಲಿ ಎಷ್ಟು ಮೀನುಗಾರಿಕಾ ರಸ್ತೆಗಳನ್ನು ಕೈಗೆತ್ತಿಕೊಳ್ಳಲಾಗಿದೆ ಹಾಗೂ ಎಷ್ಟು ಹಣ ಬಿಡುಗಡೆಯಾಗಿದೆ?

ಶ್ರೀ ಕೆ. ಜಯಪ್ರಕಾಶ್ ಹೆಗ್ಡೆ (ಮೀನುಗಾರಿಕೆ ಮತ್ತು ಬಂದರು ರಾಜ್ಯ ಸಚಿವರು) :